# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 226 |
| ಉತ್ತರಿಸಬೇಕಾದ ದಿನಾಂಕ | : | 06.12.2023 |
| ಸದಸ್ಯರ ಹೆಸರು | : | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಂದಾಯ ಇಲಾಖೆಯಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಅಳವಡಿಸಿರುವ ತಂತ್ರಾಂಶಗಳಾವುವು: (ವಿವರ ನೀಡುವುದು) | ಭೂದಾಖಲೆಗಳ ನಿರ್ವಹಣೆಯನ್ನು ಡಿಜಿಟಲೀಕರಣಗೊಳಿಸುವ ನಿಟ್ಟಿನಲ್ಲಿ ಭೂಮಿ ಉಸ್ತುವಾರಿ ಕೋಶವು ಕೃಷಿ ಜಮೀನಿಗೆ ಸಂಬಂಧಿಸಿದಂತೆ, ಪೌತಿ ಮೊದಲಾದ ನೋಂದಾಯಿತವಲ್ಲದ ಹಾಗೂ ಕ್ರಯ, ವಿಭಾಗ, ದಾನ ಇತ್ಯಾದಿ ನೋಂದಾಯಿತ ದಾಸ್ತಾವೇಜುಗಳಿಗೆ ಸಂಬಂಧಿಸಿದ ಖಾತಾ ಬದಲಾವಣೆ ಮತ್ತು ಪಹಣಿ ಇಂಡೀಕರಣ ಪ್ರಕ್ರಿಯೆಯ ನಿರ್ವಹಣೆಗಾಗಿ ಭೂಮಿ ತಂತ್ರಾಂಶ ಅಭಿವೃದ್ಧಿಪಡಿಸಿ ರಾಜ್ಯಾದ್ಯಂತ ಅಳವಡಿಸಲಾಗಿದೆ. |
| ಆ | ಕಂದಾಯ ಇಲಾಖೆಯಲ್ಲಿ ಸರ್ವರ್ ಡೌನ್ ಸಮಸ್ಯೆ ಇದೆ ಎಂದು ಸಿಬ್ಬಂದಿಗಳು ಸಾರ್ವಜನಿಕರಿಗೆ/ರೈತರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿ ಭೂಮಿ 7.0 ತಂತ್ರಾಂಶ ಚಾಲ್ತಿಯಲ್ಲಿದ್ದು, ಸದರಿ ತಂತ್ರಾಂಶವನ್ನು ಇ-ಆಡಳಿತ ಇಲಾಖೆಯ ಸಮನ್ವಯದೊಂದಿಗೆ ಕರ್ನಾಟಕ ಸ್ಟೇಟ್ ಡೇಟಾ ಸೆಂಟರ್ (KSDC)ನ ಕೇಂದ್ರೀಕೃತ ಸರ್ವರ್ ಮೂಲಕ ನಡೆಸಲಾಗುತ್ತಿದೆ.<br>ಇ-ಆಡಳಿತ ಇಲಾಖೆಯೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿದ್ದು, ಪ್ರಸ್ತುತ ಭೂಮಿ ತಂತ್ರಾಂಶಕ್ಕೆ ಸಂಬಂಧಿಸಿದಂತೆ ಯಾವುದೇ ಸರ್ವರ್ ಸಮಸ್ಯೆ ಇರುವುದಿಲ್ಲ. |
| ಇ | ಈ ರೀತಿಯ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | |

ಕಂಇ 250 ಎಂಆರ್‌ಆರ್ 2023

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು